## ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪುಟ್ಟಣ್ಣ ಇವರ ನಿಯಮ 330ರಡಿ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಉತ್ತರ

**ವಿಷಯ:**

ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಇತ್ತೀಚಿಗೆ ಹೊಸದಾಗಿ ಜಿಲ್ಲೆಗೊಂದರಂತೆ 08 ಸರ್ಕಾರಿ ವಿಶ್ವವಿದ್ಯಾಲಯಗಳನ್ನು ಸ್ಥಾಪನೆ ಮಾಡಲಾಗಿದೆ. ಇವುಗಳಲ್ಲದೆ ಹಲವಾರು ಸರ್ಕಾರಿ ಪದವಿ ಕಾಲೇಜುಗಳನ್ನು ಕ್ಲಸ್ಟರ್ ವಿಶ್ವವಿದ್ಯಾಲಯಗಳನ್ನು ಪ್ರಾರಂಭಿಸಲಾಗಿದೆ. ಈ ವಿಶ್ವವಿದ್ಯಾಲಯಗಳಲ್ಲಿ ವಿನೂತನ ಮಾದರಿಯ ಗರಿಷ್ಟ ತಂತ್ರಜ್ಞಾನ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಬಳಸದೆ ಕಾರ್ಯನಿರ್ವಹಿಸಲಿವೆ ಎಂದು ತಿಳಿಸಲಾಗಿದೆ. ಈ ವಿಶ್ವವಿದ್ಯಾಲಯಗಳ ಸ್ಥಾಪನೆಗಾಗಿ ಜಮೀನನ್ನಾಗಲಿ, ವಾಹನವನ್ನಾಗಲಿ, ಖರೀದಿಸುವಂತಿಲ್ಲ ಹಾಗೂ ಹೊಸ ಕಟ್ಟಡಗಳನ್ನು ನಿರ್ಮಿಸುವಂತಿಲ್ಲ ಹಾಗೂ ಯಾವುದೇ ಹೊಸ ಹುದ್ದೆಗಳನ್ನು ತುಂಬುವಂತಿಲ್ಲ ಎಂದು ಷರತ್ತುಗಳನ್ನು ಹಾಕಿ ಹೊಸ ವಿಶ್ವವಿದ್ಯಾನಿಲಯಗಳನ್ನು ಸ್ಥಾಪನೆ ಮಾಡಲಾಗಿದೆ. ಇದರಿಂದ ಈ ಹೊಸ ವಿಶ್ವವಿದ್ಯಾನಿಲಯಗಳನ್ನು ಸ್ಥಾಪನೆ ಮಾಡಿದ ನಂತರ ಯಾವುದೇ ಹಣಕಾಸಿನ ನೆರವು ನೀಡದೆ ಹೊಸ ಹುದ್ದೆಗಳನ್ನು ತುಂಬಲು ಅನುಮತಿ ನೀಡದೆ ಇರುವುದರಿಂದ ವಿಶ್ವವಿದ್ಯಾನಿಲಯಗಳನ್ನು ನಡೆಸಲು ಸಾಧ್ಯವಾಗದೆ ಶೈಕ್ಷಣಿಕವಾಗಿ ಹಲವಾರು ಸಮಸ್ಯೆಗಳು ಸೃಷ್ಟಿಯಾಗುತ್ತಿವೆ. ಇದರಿಂದ ಕೆಲವು ವರ್ಷಗಳ ನಂತರ ಈ ವಿಶ್ವವಿದ್ಯಾನಿಲಯಗಳೆಲ್ಲವು ಮೂಲಭೂತ ಸೌಲಭ್ಯಗಳ ಕೊರತೆಯಿಂದ ಅವನತಿಯತ್ತ ಸಾಗುತ್ತಿವೆ. ಆದ್ದರಿಂದ ಈ ಎಲ್ಲ ವಿಶ್ವವಿದ್ಯಾಲಯಗಳನ್ನು ಹಿಂದಿನಂತೆ ಮಾತೃ ವಿಶ್ವವಿದ್ಯಾನಿಲಯಗಳೊಂದಿಗೆ ವಿಲೀನಗೊಳಿಸಬೇಕೆಂಬ ವಿಷಯವನ್ನು ನಿಯಮ 330ರಡಿಯಲ್ಲಿ ಉನ್ನತ ಶಿಕ್ಷಣ ಸಚಿವರಲ್ಲಿ ಪ್ರಸ್ತಾಪಿಸುತ್ತೇನೆ.

**ಉತ್ತರ:**

2022-23 ರ ಆಯವ್ಯಯ ಘೋಷಣೆ ಕಂಡಿಕೆ-103ರಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿರುತ್ತದೆ.

> ***"ಕಾಲೇಜುಗಳ ಮೇಲ್ವಿಚಾರಣೆಯನ್ನು ಸುಧಾರಿಸಲು ರಾಜ್ಯದ ಶೈಕ್ಷಣಿಕ ಹಿಂದುಳಿದ ಪ್ರದೇಶಗ್ಗಳಲ್ಲಿ ವಿನೂತನ ಮಾದರಿಯ ಏಳು ವಿಶ್ವವಿದ್ಯಾಲಯಗಳನ್ನು ಚಾಮರಾಜನಗರ, ಬೀದರ್, ಹಾವೇರಿ, ಹಾಸನ, ಕೊಡಗು, ಕೊಪ್ಪಳ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಸ್ಥಾಪಿಸಲಾಗುವುದು. ಈ ವಿಶ್ವವಿದ್ಯಾಲಯಗಳು ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿ ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೇ ಕಾರ್ಯನಿರ್ವಹಿಸಲಿದೆ. ಸ್ನಾತಕೋತ್ತರ ಕೇಂದ್ರಗಳಲ್ಲಿ ಲಭ್ಯವಿರುವ ಸೌಲಭ್ಯಗಳನ್ನು ಬಳಸುವ ಈ ವಿಶ್ವವಿದ್ಯಾಲಯಗಳಿಗೆ ವಾರ್ಷಿಕ ತಲಾ 2 ಕೋಟಿ ರೂ. ಗಳ ಆವರ್ತಕ ವೆಚ್ಚ ಬಳಸಿ ಕಾರ್ಯನಿರ್ವಹಿಸಲಿವೆ.***

2022-23ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದಂತೆ, ಆರ್ಥಿಕ ಇಲಾಖೆ ಮತ್ತು ಯೋಜನಾ ಇಲಾಖೆಯ ಸಹಮತಿಯನ್ವಯ ಸಚಿವ ಸಂಪುಟದ ಅನುಮೋದನೆ ಮೇರೆಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಯಗಳ (ತಿದ್ದುಪಡಿ) ವಿಧೇಯಕ, 2022ನ್ನು ಅನುಷ್ಠಾನಗೊಳಿಸುವ ಮೂಲಕ ಉನ್ನತ ಶಿಕ್ಷಣ ಇಲಾಖೆಯು ಚಾಮರಾಜನಗರ, ಬೀದರ್, ಹಾವೇರಿ, ಹಾಸನ, ಕೊಡಗು, ಕೊಪ್ಪಳ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ವಿನೂತನ ಮಾದರಿಯ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲು ಸರ್ಕಾರದ ಆದೇಶ ಸಂಖ್ಯೆ: ಇಡಿ 81 ಯುಎನ್ಇ 2022, ದಿನಾಂಕ: 18.04.2022ರನ್ವಯ ಕೆಲವು ಷರತ್ತುಗಳಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದ್ದು, ಸದರಿ ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿವೆ.

..2

ರಾಜ್ಯದಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯಗಳನ್ನು ಒಳಗೊಂಡಂತೆ ರಾಜ್ಯದಲ್ಲಿರುವ ಎಲ್ಲಾ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಸನ್ಮಾನ್ಯ ಉಪ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಿದ್ದು, ಸದರಿ ಸಮಿತಿಯು ಈ ಬಗ್ಗೆ ಎರಡು ಸಭೆಗಳನ್ನು ನಡೆಸಿದ್ದು, ಪರಿಶೀಲನೆಯಲ್ಲಿರುತ್ತದೆ.

*******

**ಸಂಖ್ಯೆ: ಇಡಿ 260 ಯುಎನ್‌ಇ 2025**

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ, ಸಚಿವರು